**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆ: 1079/2021</u>**

**<u>ಪಿರ್ಯಾದಿ</u>** : ಶ್ರೀ ಎ.ಎಂ.ಪ್ರಸನ್ನ ಬಿನ್ ದಿ: ಎ.ಜಿ.ಮಂಜುನಾಥ ಗೌಡ,
ವಯಸ್ಸು ಸುಮಾರು 51 ವರ್ಷ,
ವಾಸ: ಹಳೇಕೆರೆ ಗ್ರಾಮ, ಹೀಚಹಳ್ಳಿ ಎಸ್ಟೇಟ್,
ಅಂಚೆಪೆಟ್ಟಿಗೆ ಸಂಖ್ಯೆ: ***53***, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

**ವಿರುದ್ಧ**

**<u>ಆರೋಪಿ</u>** : ಶ್ರೀ ಎ.ಆರ್.ರಾಜಣ್ಣ,
ವಯಸ್ಸು ಸುಮಾರು 60 ವರ್ಷ,
ವಾಸ: ಕೆಂಬತ್ತಮಕ್ಕಿ ಎಸ್ಟೇಟ್,
ಜೋಗಣಕೆರೆ ಅಂಚೆ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

**<u>ಆಪಾದನೆಯ ಸಾರಾಂಶ</u>**

ನಾನು ಶ್ರೀ ಸಚಿನ್.ಡಿ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ:-

ಆರೋಪಿಯಾದ ನೀವು ಪಿರ್ಯಾದಿಯಿಂದ ರೂ.***7,00,000/-*** ರೂಪಾಯಿಗಳನ್ನು ಕೈಗಡ ಸಾಲವಾಗಿ ಪಡೆದಿದ್ದು, ಸದರಿ ಹಣ ಪಾವತಿ ಮಾಡುವ ಸಲುವಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆ:***901265***, ದಿನಾಂಕ ***30.04.2021***, ರೂ.***7,00,000/-*** ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಬ್ಯಾಂಕ್ ಆಫ್ ಬರೋಡಾ, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ ***(Funds Insufficient)*** ಎಂದು ಹಿಂಬರಹ ನೀಡಿದ್ದು ಇರುತ್ತದೆ. ಕಾರಣ, ಫಿರ್ಯಾದಿಯು ದಿನಾಂಕ ***23.08.2021*** ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ ***138*** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ***?*** ಅದು ನಿಮಗೆ ಅರ್ಥವಾಯಿತೇ***?***

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ***?***

ಆರೋಪಿಯ ಉತ್ತರಃ

***(***ಆರೋಪಿಗೆ ದಿನಾಂಕ 13.07.2022 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ***,*** ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು***.*** ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

**Sd/-**

ಮೂಡಿಗೆರೆ
ದಿನಾಂಕಃ 13.07.2022

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ**.**ಎಂ**.**ಎಫ್**.**ಸಿ**,** ಮೂಡಿಗೆರೆ**.**